ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕಂದಾಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 27/5/2020

# ನೋಂದಣಿ ಮುದ್ರಾಂಕ ಶುಲ್ಕ ಇಳಿಕೆ

ಉವಾ 27/5/20

**ಬೆಂಗಳೂರು:** ರಾಜ್ಯದಲ್ಲಿ ಆಸ್ತಿ ನೋಂದಣಿಯನ್ನು ಉತ್ತೇಜಿಸಲು ಗರಿಷ್ಠ 20 ಲಕ್ಷ ರೂ.ವರೆಗೆ ಫ್ಲ್ಯಾಟ್‌ಗಳ ಮೊದಲ ನೋಂದಣಿ ಮುದ್ರಾಂಕ ಶುಲ್ಕವನ್ನು ಶೇ. 5ರಿಂದ ಶೇ. 2 ಹಾಗೂ 35 ಲಕ್ಷ ರೂ. ಮೌಲ್ಯದವರೆಗಿನ ಫ್ಲ್ಯಾಟ್‌ಗಳ ಮುದ್ರಾಂಕ ಶುಲ್ಕವನ್ನು ಶೇ. 5ರಿಂದ ಶೇ. 3ಕ್ಕೆ ಇಳಿಸಲು ಸರ್ಕಾರ ನಿರ್ಧರಿಸಿದೆ.

ಗೃಹ ಕಚೇರಿ 'ಕೃಷ್ಣಾ'ದಲ್ಲಿ ಮಂಗಳವಾರ ನಡೆದ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಈ ಸೂಚನೆ ನೀಡಿದ್ದಾರೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಮುದ್ರಾಂಕ ಮತ್ತು ನೋಂದಣಿ ಶುಲ್ಕ ಮೂಲದ ಆದಾಯದಲ್ಲಿ 3542 ಕೋಟಿ ರೂ. ಖೋತಾ ಆಗುವ ನಿರೀಕ್ಷೆ ಇದೆ. ಆ ಹಿನ್ನೆಲೆಯಲ್ಲಿ ಆಸ್ತಿ ನೋಂದಣಿಗೆ ಉತ್ತೇಜಿಸಲು ಸರ್ಕಾರ ಶುಲ್ಕ ಇಳಿಕೆ ಮಾಡಲು ನಿರ್ಧರಿಸಿದೆ.

ಕೈಗೆಟಕುವ ದರಗಳ ಮನೆ ಖರೀದಿಯನ್ನು ಪ್ರೋತ್ಸಾಹಿಸಲು 20 ಲಕ್ಷ ರೂ. ಮೌಲ್ಯದ ಫ್ಲ್ಯಾಟ್‌ನ ಮೊದಲ ನೋಂದಣಿಗೆ ಮುದ್ರಾಂಕ ಶುಲ್ಕವನ್ನು ಶೇ. 5ರಿಂದ ಶೇ. 2 ಹಾಗೂ 35 ಲಕ್ಷ ರೂ. ಮೌಲ್ಯದವರೆಗಿನ ಫ್ಲ್ಯಾಟ್‌ಗಳ ಮೊದಲ ನೋಂದಣಿ ಮುದ್ರಾಂಕ ಶುಲ್ಕವನ್ನು ಶೇ. 5ರಿಂದ ಶೇ.3ಕ್ಕೆ ಇಳಿಸುವಂತೆ ಯಡಿಯೂರಪ್ಪ ಸೂಚನೆ ನೀಡಿದ್ದಾರೆ.

ಹಾಗೆಯೇ ಬಸವಕಲ್ಯಾಣದಲ್ಲಿ ಅನುಭವ ಮಂಟಪ ಸ್ಥಾಪನೆಗೆ 100 ಕೋಟಿ ರೂ. ಅನುದಾನ ನೀಡುವುದು. 164 ತಾಲೂಕುಗಳಲ್ಲಿ ಭೂನ್ಯಾಯ ಮಂಡಳಿ ರಚಿಸುವಂತೆಯೂ ಮುಖ್ಯಮಂತ್ರಿಗಳು ಆದೇಶಿಸಿದರು.

**'ಸಮಿತ್ವ' ಯೋಜನೆ ಜಾರಿಗೆ ಸೂಚನೆ:** ಡ್ರೋನ್ ಆಧಾರಿತ ಸರ್ವೇ ಸಮಿತ್ವ ಯೋಜನೆಯಡಿ 16,000 ಗ್ರಾಮಗಳನ್ನು ಗುರುತಿಸಲಾಗಿದೆ. ಗ್ರಾಮ ನಿವಾಸಿಗಳಿಗೆ ಅವರ ವಾಸ ಸ್ಥಳದ ಆಸ್ತಿಗಳಿಗೆ 'ಪ್ರಾಪರ್ಟಿ ಕಾರ್ಡ್' ವಿತರಿಸುವ ಯೋಜನೆ ಇದಾಗಿದೆ. ಯೋಜನೆ ಜಾರಿಗೆ ದೇಶದ ಏಳು ರಾಜ್ಯಗಳ ಪೈಕಿ ಕರ್ನಾಟಕವನ್ನು ಗುರುತಿಸಲಾಗಿದ್ದು, ರಾಜ್ಯದಲ್ಲಿ ತ್ವರಿತ ಜಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸೂಚನೆ ನೀಡಿದರು.

ಸಚಿವರಾದ ಆರ್.ಅಶೋಕ್, ಕೋಟ ಶ್ರೀನಿವಾಸ ಪೂಜಾರಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಎಸ್.ಆರ್. ವಿಶ್ವನಾಥ್, ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯ ಭಾಸ್ಕರ್, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ಎನ್. ಮಂಜುನಾಥ ಪ್ರಸಾದ್ ಉಪಸ್ಥಿತರಿದ್ದರು.